**ನಿರ್ದೇಶಕರ**
**ಕಛೇರಿ**ಅಲ್ಪಸಂಖ್ಯಾತರ ಕಲ್ಯಾಣ
ನಿರ್ದೇಶನಾಲಯ

**ಕರ್ನಾಟಕ ಸರ್ಕಾರ**

ದೂರವಾಣಿ:080– 22864212.
ಫ್ಯಾಕ್ಸ್: 080–22863618.
Email:directorgokdom@gmail.com
Web: https://gokdom.kar.nic.in
20ನೇ ಮಹಡಿ, ವಿ.ವಿಗೋಪುರ,
ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು 560001.

**ಸಂಖ್ಯೆ: ಅಸಂನಿ:ಬಿ.ಎಡ್/ಡಿ.ಎಡ್/ಸಿಆರ್–01/2019–20** **ದಿನಾಂಕ:17.07.2019**

## 'ಸುತ್ತೋಲೆ'

**ವಿಷಯ:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ **ಬಿ.ಎಡ್ ಹಾಗೂ ಡಿ.ಎಡ್** ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ರೂ.25,000/–ಗಳ ವಿಶೇಷ ಪ್ರೋತ್ಸಾಹಧನ ಮಂಜೂರು ಮಾಡುವ ಕುರಿತು.

**ಉಲ್ಲೇಖ:** ಸರ್ಕಾರದ ಆದೇಶ ಸಂಖ್ಯೆ: MWD 279 MDS 2018, ದಿನಾಂಕ:15–10–2018.

–***–

ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧರು ಮತ್ತು ಪಾರ್ಸಿ ಜನಾಂಗದವರಿಗೆ ಮೆರಿಟ್–ಕಮ್–ಮೀನ್ಸ್ ವಿದ್ಯಾರ್ಥಿವೇತನವನ್ನು ನೀಡಲಾಗುತ್ತಿದೆ. ಈ ಯೋಜನೆಯಡಿಯಲ್ಲಿ ತಾಂತ್ರಿಕ ಹಾಗೂ ವೃತ್ತಿಪರ ವಿವಿಧ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡಲಾಗುತ್ತಿದೆ ಹಾಗೂ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿಯುಸಿಯಲ್ಲಿ ಹೆಚ್ಚು ಅಂಕಗಳಿಸುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಸಹ ನೀಡಲಾಗುತ್ತಿದೆ. ಅದರಂತೆ ಶೈಕ್ಷಣಿಕ ಹಿತದೃಷ್ಟಿಯಿಂದ ಹಾಗೂ ಗ್ರಾಮೀಣ ಮತ್ತು ನಗರ ವಿಭಾಗದನ ಆರ್ಥಿಕವಾಗಿ ಹಿಂದುಳಿದ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸವನ್ನು ಮುಂದುವರೆಸಲು ಪ್ರೋತ್ಸಾಹಿಸಿ ಕಲಿಕಾ ಮತ್ತು ಭೋದನಾ ಸಾಮಾಗ್ರಿಗಳನ್ನು ಖರೀದಿಸಲು ಆರ್ಥಿಕ ಸಹಾಯ ಮಾಡುವ ಹಿತದೃಷ್ಟಿಯಿಂದ National Council for Teacher Education ನಿಂ ದ ಮಾನ್ಯತೆ ಪಡೆದಿರುವ ಬಿ.ಎಡ್ ಹಾಗೂ ಸರ್ಕಾರಿ/ಅರೆಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಕಾಲೇಜು, Department of State Educational Research and Training ನಿಂದ ಮಾನ್ಯತೆ ಪಡೆದಿರುವ ಬಿ.ಎಡ್ ಹಾಗೂ ಸರ್ಕಾರಿ/ಅರೆಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ಬಿ.ಎಡ್. ಮತ್ತು ಡಿ.ಎಡ್ ಕೋರ್ಸ್‌ಗಳಲ್ಲಿ ದಾಖಲಾತಿ ಹೊಂದಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ ವಿದ್ಯಾರ್ಥಿಗಳಿಗೆ ರೂ.25,000/–ಗಳ ವಿಶೇಷ ಪ್ರೋತ್ಸಾಹಧನ ಪ್ರತಿ ವರ್ಷ (ಗರಿಷ್ಠ 2ವರ್ಷ) ನೀಡಲು ಆದೇಶಿಸಲಾಗಿದೆ. (ಪ್ರತಿ ಲಗತ್ತಿಸಿದೆ.)